ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 2 ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 26/09/20

## ಇಂದು ದಿ.ಎ.ಕೆ.ಸುಬ್ಬಯ್ಯ ಕುರಿತ ಪುಸ್ತಕ ಬಿಡುಗಡೆ

**ಪೊನ್ನಂಪೇಟೆ:** ಕರ್ನಾಟಕ ರಾಜ್ಯದ ಪ್ರತಿಭಾವಂತ ಸಂಸದೀಯ ಪಟುಗಳ ಪುಸ್ತಕ ಮಾಲಿಕೆಯಡಿ ಕರ್ನಾಟಕ ವಿಧಾನ ಮಂಡಲದ ಗ್ರಂಥಾಲಯ ಸಮಿತಿ ವತಿಯಿಂದ



ಪ್ರಕಟಿಸಲಾಗಿರುವ ಮಾಜಿ ಶಾಸಕ, ಹಿರಿಯ ಸಂಸದೀಯ ಪಟುಗಳಾಗಿದ್ದ ದಿವಂಗತ ಎ.ಕೆ.ಸುಬ್ಬಯ್ಯನವರ ಕುರಿತ ಪುಸ್ತಕ ಬಿಡುಗಡೆ ಸಮಾರಂಭವು ಶನಿವಾರ (ಸ.26) ಬೆಂಗಳೂರಿನಲ್ಲಿ ಜರುಗಲಿದೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಈ ಪುಸ್ತಕವನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಇದೇ ಕಾರ್ಯಕ್ರಮದಲ್ಲಿ ಮತ್ತೋರ್ವ ಮಾಜಿ ಶಾಸಕ ಡಾ.ಮಹಾದೇವ ಬಣಕಾರ್ ಅವರ ಕುರಿತ ಪುಸ್ತಕವೂ ಬಿಡುಗಡೆಯಾಗಲಿದೆ. ಈ ಪುಸ್ತಕವನ್ನು ಬೆಂಗಳೂರಿನ ಹೆಸರಾಂತ ಸಾಹಿತಿ, ಲೇಖಕಿ ಶಶಿಕಲಾ ಗೌಡ ಸಂಪಾದಿಸಿದ್ದಾರೆ. ಪರಿಷತ್ ಸಭಾಪತಿ ಕೆ.ಪ್ರತಾಪ ಚಂದ್ರ ಶೆಟ್ಟಿ ಅಧ್ಯಕ್ಷತೆಯಲ್ಲಿ ನಡೆಯುವ ಸಮಾರಂಭವನ್ನು ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಉದ್ಘಾಟಿಸಲಿದ್ದಾರೆ.